# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 157
2. ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 13.09.2022
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೋಲಾರ ಜಿಲ್ಲೆಯ ಕೇಂದ್ರ ಸ್ಥಾನವಾದ ಕೋಲಾರದಲ್ಲಿ APMC ಮಾರುಕಟ್ಟೆಯ ವಿಸ್ತೀರ್ಣ ಬಹಳ ಚಿಕ್ಕದಾಗಿದ್ದು, ರೈತರಿಗೆ ಮತ್ತು ವ್ಯಾಪಾರಸ್ಥರಿಗೆ ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಬಂದಿದ್ದಲ್ಲಿ, ಈ ಮಾರುಕಟ್ಟೆಯನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರಗಳನ್ನು ನೀಡುವುದು) | ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ, ಕೋಲಾರ, ಇವರ ದಿನಾಂಕ:30.07.2021ರ ಪತ್ರದಲ್ಲಿ ಕಂದಾಯ ಇಲಾಖೆಗೆ "ಅರಣ್ಯ ಇಲಾಖೆಗೆ ಸೇರಿದ ಕೋಲಾರ ತಾಲ್ಲೂಕು, ವಕ್ಕಲೇರಿ ಹೋಬಳಿ ಕಪರಸಿದ್ದನಹಳ್ಳಿ ಗ್ರಾಮದ ಸರ್ವೆ ನಂ.08ರಲ್ಲಿ 17 ಎಕರೆ 10 ಗುಂಟೆ ಮತ್ತು ಮಡೇರಹಳ್ಳಿ ಗ್ರಾಮದ ಸರ್ವೆ ನಂ.35ರಲ್ಲಿ 12 ಎಕರೆ 30 ಗುಂಟೆ ಒಟ್ಟು 30 ಎಕರೆ ಜಮೀನನ್ನು ಕೃಷಿ ಮಾರುಕಟ್ಟೆ ಸಮಿತಿಗೆ ವರ್ಗಾಯಿಸಿ ಇದರ ಬದಲಾಗಿ ಕೋಲಾರ ತಾಲ್ಲೂಕು, ಹೋಳೂರು ಹೋಬಳಿ, ನಾಯಕರಹಳ್ಳಿ ಗ್ರಾಮದ ಸರ್ವೆ ನಂ.192ರಲ್ಲಿ 18-03 ಹೆಕ್ಟೇರ್ ಜಮೀನನ್ನು ಅರಣ್ಯ ಇಲಾಖೆಗೆ ವರ್ಗಾಯಿಸಲು ಸುತ್ತೋಲೆ ದಿನಾಂಕ: 08.08.2008ರನ್ವಯ ಜಿಲ್ಲಾಧಿಕಾರಿಗಳಿಗೆ ಅಧಿಕಾರ ಇಲ್ಲದಿರುವುದರಿಂದ ಪ್ರಸ್ತಾಪಿತ ಬದಲಿ ಜಮೀನನ್ನು ಅರಣ್ಯ ಇಲಾಖೆಗೆ ವರ್ಗಾಯಿಸಲು ಮಂಜೂರಾತಿ ಹಾಗೂ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.<br><br>ನಂತರದಲ್ಲಿ ಅರಣ್ಯ ಇಲಾಖೆಯಿಂದ ಕೋರಿರುವ ಹೆಚ್ಚುವರಿ ಮಾಹಿತಿ/ದಾಖಲೆಗಳನ್ನು ಸಲ್ಲಿಸಲಾಗಿದ್ದು, ಪ್ರಸ್ತುತ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (FCA), ಇವರು ಅರಣ್ಯ ಸಂರಕ್ಷಣಾ ಕಾಯ್ದೆ 1980 ರಂತೆ ಕೇಂದ್ರ ಸರ್ಕಾರದ ಪೂರ್ವ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಶಿಫಾರಸ್ಸು ಮಾಡುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಗೆ ದಿನಾಂಕ:10/15.02.2022ರಂದು ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಸರ್ಕಾರದೊಂದಿಗೆ ಸಂವಹಿಸಿ ಅನುಮೋದನೆ ಪಡೆಯುವ ಬಗ್ಗೆ ಪರಿಶೀಲನೆಯಲ್ಲಿದೆ.<br><br>ಏತನ್ಮಧ್ಯೆ ಅರಣ್ಯ ಇಲಾಖೆಯ ಉನ್ನತಾಧಿಕಾರಿಗಳ ನಿಯೋಗವು ದಿನಾಂಕ:18.08.2022 ರಂದು ಹಾಲಿ ಪ್ರಾಂಗಣವನ್ನು ಹಾಗೂ ಮಂಜೂರಾತಿ ನೀಡುವ ಅರಣ್ಯ ಪ್ರದೇಶವನ್ನು ಸ್ಥಳ ಪರಿವೀಕ್ಷಣೆ ನಡೆಸಿದ್ದು, ಮಾರುಕಟ್ಟೆ ವಿಸ್ತರಣೆ ಕುರಿತಂತೆ ಸಮಿತಿ ಕೈಗೊಳ್ಳುವ ವಿವಿಧ ಮೂಲಭೂತ ಸೌಕರ್ಯಗಳ ಬಗ್ಗೆ ವಿವರವಾದ ನಕಾಶೆಯನ್ನು ಸಲ್ಲಿಸಿದಲ್ಲಿ ಮುಂದಿನ ಅಧಿಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿ (Empowered committee) ಮಂಜೂರಾತಿಗೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದು, ಈ ಬಗ್ಗೆ ಸಹ ಕ್ರಮ ವಹಿಸಲಾಗಿದೆ. |

ಸಂಖ್ಯೆ: ಸಿಒ 214 ಎಂಆರ್‌ಇ 2022

(ಎಸ್.ಟಿ. ಸೋಮಶೇಖರ್)
ಸಹಕಾರ ಸಚಿವರು